**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2016-17** **ದಿನಾಂಕ: 19-11-2016**

# ಮಾಧ್ಯಮದವರ ಗಮನಕ್ಕೆ

**ಬೆಳಗಾವಿಯಲ್ಲಿ ಜರುಗಲಿರುವ ಅಧಿವೇಶನ ವರದಿಗೆ ಬೆಂಗಳೂರಿನಿಂದ ತೆರಳುವ ಸಂಬಂಧ ವಾರ್ತಾ ಇಲಾಖೆಯಲ್ಲಿ ಹೆಸರನ್ನು ನೋಂದಾಯಿಸಿದ್ದ ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ದಿನಪತ್ರಿಕೆಗಳು ಮತ್ತು ವಿದ್ಯುನ್ಮಾನ ಮಾಧ್ಯಮ ಪ್ರತಿನಿಧಿಗಳ ವಾಸ್ತವ್ಯಕ್ಕೆ ಹಂಚಿಕೆಯಾಗಿರುವ ಹೋಟೆಲ್‌ಗಳ ವಿವರ ಈ ಕೆಳಕಂಡಂತಿದೆ. ಮಾಧ್ಯಮ ಪ್ರತಿನಿಧಿಗಳು 20-11-2016 ರಂದು ಬೆಳಗ್ಗೆ ತಮಗೆ ನಿಗದಿಪಡಿಸಿರುವ ಕೊಠಡಿಗಳನ್ನು ತಮ್ಮ ವಶಕ್ಕೆ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಬೆಳಗಾವಿ ಜಿಲ್ಲೆಯ ವಾರ್ತಾಧಿಕಾರಿಗಳಾದ ಶ್ರೀ ಗುರುನಾಥ್ ಕಡಬೂರು ಅವರನ್ನು ಮೊಬೈಲ್ ಸಂಖ್ಯೆ 9480841233 ರ ಮೂಲಕ ಸಂಪರ್ಕಿಸಬಹುದು.**

**ಪಟ್ಟಿ ಲಗತ್ತಿಸಿದೆ:**

## ದಿನನಿತ್ಯದ ಆಹಾರದಲ್ಲಿ ಸಿರಿಧಾನ್ಯಗಳನ್ನು ಹೆಚ್ಚು ಬಳಸಿ

–ಸಚಿವ ಕೃಷ್ಣಬೈರೇಗೌಡ ಕರೆ

ಬೆಂಗಳೂರು, ನ. 19 : (ಕರ್ನಾಟಕ ವಾರ್ತೆ)

ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಗನುಗುಣವಾಗಿ ಸಮತೋಲಿತ ಆಹಾರ ಪದ್ಧತಿಯನ್ನು ನಾವಿಂದು ಅಳವಡಿಸಿಕೊಳ್ಳಬೇಕಾಗಿದ್ದು, ಅತಿ ಹೆಚ್ಚು ಪೋಷಕಾಂಶ ಹಾಗೂ ನಾರಿನಾಂಶ ಹೊಂದಿರುವಂತಹ ರಾಗಿ, ನವಣೆ, ಬರಗು, ಹಾರಕ, ಸಾಮೆ, ಸಜ್ಜೆ, ಊದಲು ಮತ್ತು ಕೊರಲೆ ಮುಂತಾದ ಸಿರಿಧಾನ್ಯಗಳನ್ನು ಹೇರಳವಾಗಿ ನಾವು ಸೇವಿಸುವ ಆಹಾರದಲ್ಲಿ ಬಳಸಿದಲ್ಲಿ ಉತ್ತಮ ಆರೋಗ್ಯವನ್ನು ಹೊಂದಬಹುದಾಗಿದೆ ಎಂದು ಕೃಷಿ ಸಚಿವ ಕೃಷ್ಣಬೈರೇಗೌಡ ಅವರು ಕರೆ ನೀಡಿದರು.

ಕೃಷಿ ಇಲಾಖೆ, ಜೈವಿಕ್ ಕೃಷಿ ಸೊಸೈಟಿ ಸಂಯುಕ್ತಾಶ್ರಯದಲ್ಲಿಂದು ಇಂದಿರಾನಗರದ 'ಇಂದಿರಾನಗರ ಕ್ಲಬ್‌ನಲ್ಲಿ' ಸಾವಯವ ಉತ್ಪನ್ನಗಳು ಹಾಗೂ ಸಿರಿಧಾನ್ಯಗಳ ಕುರಿತು ಗ್ರಾಹಕರಿಗೆ ಜಾಗೃತಿ ಮೂಡಿಸುವ 'ಸಾವಯವ ಹಾಗೂ ಸಿರಿಧಾನ್ಯ ಮೇಳ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದ ಸಚಿವರು, ಸಿರಿಧಾನ್ಯಗಳು ಬಡವರ ಆಹಾರವೆಂದು ನಾವಿಂದು ಭಾವಿಸಿದ್ದೇವೆ. ಈ ಹಿಂದೆ ನಮ್ಮ ಹಿರಿಯರು ತಾವು ಬಳಸುತ್ತಿದ್ದ ಆಹಾರದಲ್ಲಿ ಶೇ 60 ರಷ್ಟು ಸಿರಿಧಾನ್ಯಗಳನ್ನು ಬಳಸುತ್ತಿದ್ದರು. ಆದರೆ ಇಂದಿನ ನಮ್ಮ ಆಹಾರ ಪದ್ಧತಿಯಲ್ಲಿ ಸಿರಿಧಾನ್ಯಗಳ ಬಳಕೆ ಶೇ. 5 ಕ್ಕೂ ಕಡಿಮೆ ಇದೆ . ಇದರಿಂದ ಆರೋಗ್ಯ ಸಮಸ್ಯೆಗಳು ಹೆಚ್ಚಲಿವೆ ಎಂದರು.

ನಮ್ಮ ದೇಶದಲ್ಲಿ ಹೃದ್ರೋಗ,ಸಕ್ಕರೆ ಖಾಯಿಲೆಗಳಿಂದ ಬಳಲುತ್ತಿರುವವರ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿದೆ. ಮತ್ತೊಂದೆಡೆ ಜನರಿಗೆ ಆರೋಗ್ಯದ ಬಗ್ಗೆಯೂ ಕೂಡಾ ಕಾಳಜಿ ಹೆಚ್ಚುತ್ತಿದೆ. ಇಂತಹ ಸಂದರ್ಭದಲ್ಲಿ ಸ್ವಾಭಾವಿಕವಾಗಿ ಖಾಯಿಲೆ ನಿಯಂತ್ರಿಸಿ ಆರೋಗ್ಯ ಕಾಪಾಡುವ ಸಿರಿಧಾನ್ಯಗಳು ಅತ್ಯುತ್ತಮ ಆಯ್ಕೆ ಎಂದು ಸಚಿವರು ತಿಳಿಸಿದರು.

ಹಣ್ಣು ತರಕಾರಿಗಳಿಗೆ ನೀಡಿದಂತೆ ಸಿರಿಧಾನ್ಯಗಳಿಗೆ ಪ್ರಥಮ ಆದ್ಯತೆಯನ್ನು ನಾವು ಇಂದು ನೀಡಬೇಕಿದೆ. ಅಕ್ಕಿ, ಗೋಧಿ, ಸಕ್ಕರೆಗೆ ಸಮನಾಗಿ ಸಿರಿಧಾನ್ಯಗಳನ್ನು ಯಥೇಚ್ಚವಾಗಿ ಉಪಯೋಗಿಸಬಹುದಾಗಿದೆ ಎಂದ ಸಚಿವರು, ಸಿರಿಧಾನ್ಯಗಳು ಮಾನವನಿಗೆ ಮಾತ್ರವಲ್ಲದೆ ಪರಿಸರಕ್ಕೂ ಕೂಡಾ ಪೂರಕವಾಗಿವೆ. ಅಕ್ಕಿ, ಗೋಧಿ, ಕಬ್ಬಿನ ಬೆಳೆಗಳಿಗೆ ಒದಗಿಸುವ ನೀರಿನ ಕಾಲು ಭಾಗದಷ್ಟು ಅಲ್ಪ ಪ್ರಮಾಣದ ನೀರಿನಲ್ಲಿ ಸಿರಿಧಾನ್ಯಗಳನ್ನು ಬೆಳೆಯಬಹುದಾಗಿದ್ದು, ಸಿರಿಧಾನ್ಯ ಬೆಳೆಗಳಿಗೆ ಅತಿ ಕಡಿಮೆ ಔಷಧಿಯನ್ನು ಸಿಂಪಡಿಸಬಹುದಾಗಿದೆ. ಕಡಿಮೆ ರಾಸಾಯನಿಕ ಗೊಬ್ಬರವನ್ನು ಬೆಳೆಗಳಿಗೆ ಒದಗಿಸುವ ಮೂಲಕ ಅತಿ ಕಡಿಮೆ ಖರ್ಚಿನಲ್ಲಿ ಸ್ವಾಭಾವಿಕ ಸಾವಯವ ಪದ್ಧತಿಯಲ್ಲಿ ಸಿರಿಧಾನ್ಯಗಳನ್ನು ಬೆಳೆಯಬಹುದಾಗಿದೆ ಎಂದು ವಿವರಿಸಿದರು.

ಬರಗಾಲದಲ್ಲೂ ಕೊನೆಯವರೆಗೂ ಉಳಿಯುವ ಬೆಳೆಗಳು ಸಿರಿಧಾನ್ಯಗಳು. ಸಿರಿಧಾನ್ಯ ಬೆಳೆಗಳ ಮೇವು ಸಹ ಅಧಿಕ ಪೌಷ್ಠಿಕಾಂಶ ಹೊಂದಿದ್ದು ರಾಸುಗಳಿಗೆ ಇವು ಉತ್ತಮವಾಗಿದೆ ಎಂದ ಸಚಿವರು, ಸಿರಿಧಾನ್ಯ ಪದಾರ್ಥಗಳಿಂದ ಮುದ್ದೆ, ರೊಟ್ಟಿಯಂತಹ ಸಾಂಪ್ರಾದಾಯಕ ಆಹಾರ ಪದಾರ್ಥಗಳಲ್ಲದೆ, ಇಂದಿನ ಯುವಜನಾಂಗ ಬಯಸುವ ಕೇಕ್, ಬ್ರೆಡ್. ಪೇಸ್ಟರಿ, ಕುಕ್ಕಿಸ್, ಪಾಸ್ತ, ಐಸ್‌ಕ್ರೀಂ ಸೇರಿದಂತೆ ಇಡ್ಲಿ, ದೋಸೆ, ಬಿಸಿಬೇಳೆ ಬಾತ್ ಮುಂತಾದ ಆಹಾರಗಳನ್ನು ಸಹ ತಯಾರಿಸಬಹುದಾಗಿದ್ದು, ಈ ಕುರಿತಂತೆ ಸಿರಿಧಾನ್ಯ ಮೇಳದಲ್ಲಿ ಪ್ರಾತ್ಯಕ್ಷಿಕೆಗಳನ್ನು ಸಹ ಏರ್ಪಡಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಹೊರದೇಶದ ಆಹಾರ ಪದಾರ್ಥಗಳಾದ ಕಿನೋವ, ಓಟ್ಸ್‌ಗಳಿಗೆ ಇಂದು ಬೇಡಿಕೆ ಹೆಚ್ಚಿದೆ. ಅಂದರೆ ಇವುಗಳಿಗೆ ಹೋಲಿಸಿದಲ್ಲಿ ಪೌಷ್ಠಿಕಾಂಶಭರಿತ ನಮ್ಮ ಸಿರಿಧಾನ್ಯಗಳು ಅತ್ಯುತ್ತಮವಾಗಿದೆ, 21ನೇ ಶತಮಾನದ ಸ್ಮಾರ್ಟ್‌ಫುಡ್ ಎಂದರೆ ನಮ್ಮ ಸಿರಿಧಾನ್ಯಗಳು ಎಂದು ಸಚಿವರು ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ಬಿ.ಬಿ.ಎಂ.ಪಿ. ಸದಸ್ಯರಾದ ಆನಂದಕುಮಾರ್, ಜೈವಿಕ ಕೃಷಿ ಸೊಸೈಟಿಯ ಅಧ್ಯಕ್ಷರಾದ ಡಾ. ಕೆ. ರಾಮಕೃಷ್ಣಪ್ಪ, ಕೃಷಿ ನಿರ್ದೇಶಕರಾದ ಬಿ. ವೈ. ಶ್ರೀನಿವಾಸ, ಇಂದಿರಾನಗರ ಕ್ಲಬ್ ಅಧ್ಯಕ್ಷ ಬಿ.ಎನ್.ಎಸ್. ರೆಡ್ಡಿ, ಪ್ರದೇಶ ಕೃಷಿಕ ಸಮಾಜದ ಅಧ್ಯಕ್ಷ ಬಿ.ಕೆ. ಮಂಜುನಾಥ ಗೌಡ ಅವರುಗಳು ಸೇರಿದಂತೆ ಕೃಷಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಎಂಆರ್‌ಎಂ:ಪಿಆರ್.

# ಪುಟಾಣಿಗಳಿಗಾಗಿ ಕಮ್ಮಟ

ಬೆಂಗಳೂರು, ನ. 19 : (ಕರ್ನಾಟಕ ವಾರ್ತೆ)

ಜವಾಹರ್‌ಲಾಲ್ ನೆಹರು ತಾರಾಲಯ ಹಾಗೂ ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಹಯೋಗದೊಂದಿಗೆ ಮಕ್ಕಳ ದಿನಾಚರಣೆಯ ಅಂಗವಾಗಿ ಶಾಲಾ ಪುಟಾಣಿಗಳಿಗಾಗಿ ಒಂದು ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಈ ಹಿನ್ನೆಲೆಯಲ್ಲಿ ನವೆಂಬರ್ 20 ರ ಭಾನುವಾರದಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ಗಂಟೆವರೆಗೆ ನಗರದ ಜವಾಹ್‌ಲಾಲ್ ನೆಹರು ತಾರಾಲಯ, ಶ್ರೀ ಟಿ. ಚೌಡಯ್ಯ ರಸ್ತೆ, ಹೈ ಗ್ರೌಂಡ್ಸ್, ಬೆಂಗಳೂರು – 560 001 ಇಲ್ಲಿ ಪುಟಾಣಿಗಳಿಗಾಗಿ ಕಮ್ಮಟವನ್ನು ಏರ್ಪಡಿಸಿದೆ.

ಮೂರರಿಂದ ಐದನೇ ತರಗತಿಯ ವಿದ್ಯಾರ್ಥಿಗಳು ಈ ಕಮ್ಮಟದಲ್ಲಿ ಪಾಲ್ಗೊಳ್ಳಲು ಅವಕಾಶವಿದ್ದು, ಒಟ್ಟು 30 ವಿದ್ಯಾರ್ಥಿಗಳು ಈ ಕಮ್ಮಟದ ಪ್ರಯೋಜನವನ್ನು ಪಡೆಯಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ – 2237 9725 / 2226 6084 ಅಥವಾ http://www.taralaya.org/announcements.php ಅನ್ನು ಸಂಪರ್ಕಿಸಬಹುದಾಗಿದೆ.

ಕೆಎನ್‌ಕೆ:ಜಿಪಿಆರ್.

# ಅಖಿಲ ಭಾರತ ವೃತ್ತಿ ಪರೀಕ್ಷೆ ಫಲಿತಾಂಶ ಪ್ರಕಟ

ಬೆಂಗಳೂರು, ನ. 19 : (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಕುಶಲಕರ್ಮಿ ತರಬೇತಿ ಯೋಜನೆಯಡಿ ನಡೆದ ಅಖಿಲ ಭಾರತ ವೃತ್ತಿ ಪರೀಕ್ಷೆಯ ಫಲಿತಾಂಶವನ್ನು ಸಂಬಂಧಪಟ್ಟ ಪರೀಕ್ಷಾ ಕೇಂದ್ರಗಳಲ್ಲಿ, ವಿಭಾಗೀಯ ಕಚೇರಿಗಳಲ್ಲಿ ನವೆಂಬರ್ 21 ರಂದು ಬೆಳಿಗ್ಗೆ 11-00 ಗಂಟೆಗೆ ಪ್ರಕಟಿಸಲಾಗುವುದು.

ಅಂಕಪಟ್ಟಿಯನ್ನು ಪಡೆಯಲು ನವೆಂಬರ್ 30 ರ ನಂತರ ಆಯಾ ಪರೀಕ್ಷಾ ಕೇಂದ್ರಗಳ ಪ್ರಾಚಾರ್ಯರನ್ನು ಸಂಪರ್ಕಿಸಬಹುದು. ಫಲಿತಾಂಶವನ್ನು ನವೆಂಬರ್ 19 ರ ನಂತರ ಇಲಾಖೆಯ ವೆಬ್‌ಸೈಟ್ www.emptrg.kar.nic.in ನಲ್ಲೂ ಸಹ ಲಭ್ಯವಿದೆ ಎಂದು ರಾಜ್ಯ ಪರೀಕ್ಷಾ ಮಂಡಳಿ ಪ್ರಕಟಣೆ ತಿಳಿಸಿದೆ.

ಕೆಎನ್‌ಕೆ:ಜಿ:ಪಿಆರ್.

# ಶುಲ್ಕ ಪಾವತಿಸಲು ಕಾಲಾವಕಾಶ

ಬೆಂಗಳೂರು, ನವೆಂಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಹಾಯಕ ನಿಯಂತ್ರಕರು (ಗ್ರೂಪ್ – ಎ) ಮತ್ತು ಲೆಕ್ಕಪರಿಶೋಧನಾಧಿಕಾರಿ (ಗ್ರೂಪ್ –ಬಿ) ವೃಂದದ 162 ಹುದ್ದೆಗಳ ಮುಖ್ಯ ಪರೀಕ್ಷೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನವೆಂಬರ್ 18 ರವರೆಗೆ ಹಾಗೂ ಕರ್ನಾಟಕ ರಾಜ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿನ ಸಮೂಹ 'ಎ' ವೃಂದದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಒಟ್ಟು 25 ಹುದ್ದೆಗಳ ಮುಖ್ಯ ಪರೀಕ್ಷೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನವೆಂಬರ್ 16 ರವರೆಗೆ ಶುಲ್ಕ ಪಾವತಿಸಲು ಅವಕಾಶ ನೀಡಲಾಗಿತ್ತು.

ಪ್ರಸ್ತುತ ಅಂಚೆ ಕಚೇರಿಗಳಲ್ಲಿ ಶುಲ್ಕ ಪಾವತಿಸಲು ಅಭ್ಯರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ, ಅಭ್ಯರ್ಥಿಗಳಿಗೆ ಮೇಲಿನ ಎರಡು ಪರೀಕ್ಷೆಗಳಿಗೂ ಶುಲ್ಕ ಪಾವತಿಸಲು ನವೆಂಬರ್ 24 ರವರೆಗೆ ಕಾಲಾವಕಾಶವನ್ನು ನೀಡಲಾಗಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

ಕೆಎನ್‌ಕೆ:ಜಿ:ಪಿಆರ್.

## ತಾಂತ್ರಿಕ/ತಾಂತ್ರಿಕೇತರ ಹುದ್ದೆಗಳಿಗೆ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ನ. 19 : (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕಳೆದ ವರ್ಷ ನವೆಂಬರ್ ಹಾಗೂ ಡಿಸೆಂಬರ್‌ನಲ್ಲಿ ಹೊರಡಿಸಲಾದ ಅಧಿಸೂಚನೆಯನ್ವಯ ವಿವಿಧ ಇಲಾಖೆಗಳಲ್ಲಿನ ವಿವಿಧ ತಾಂತ್ರಿಕ/ತಾಂತ್ರಿಕೇತರ ಹುದ್ದೆಗಳ ಅಂತಿಮ ಆಯ್ಕೆಪಟ್ಟಿಗಳನ್ನು ಆಯೋಗದ ಅಂತರ್ಜಾಲ "http://kpsc.kar.nic.in/Selection List" ದಲ್ಲಿ ದಿನಾಂಕ 16-11-2016 ರಂದು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಕೆಎನ್‌ಕೆ:ಜಿ:ಪಿಆರ್.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ನ. 19 : (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ:20-11-2016ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀ. ಶೇಖರ್ ಭಜಂತ್ರಿ ಮತ್ತು ತಂಡ, ಯಾದಗಿರಿ ಜಿಲ್ಲೆ ರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ

2) ಸಂಜೆ 04.00 ಗಂಟೆಯಿಂದ ಸಂಜೆ 05.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ , ಬೆಂಗಳೂರು ರವರು ಸಹಯೋಗ ಅಕ್ಷಯ ಫೌಂಡೇಷನ್ , ಬೆಂಗಳೂರು ರವರು ಶ್ರೀ. ಇಂದ್ರಬೆಟ್ಟ , ಉಪನ್ಯಾಸಕರು ಮತ್ತು ಸಾಹಿತಿಗಳಿಂದ ಕರ್ನಾಟಕ ಏಕೀಕರಣ ಕುರಿತಂತೆ ಉಪನ್ಯಾಸ ಹಾಗೂ ಸಂಜನಾ ಮತ್ತು ತಂಡದವರಿಂದ ಜನಪದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಿದೆ.

3) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ.ರವಿಕುಮಾರ್ ಆಲನಹಳ್ಳಿ ಮತ್ತು ತಂಡ, ಮೈಸೂರು ಜಿಲ್ಲೆ ರವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

4) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

5) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ** ಸಹಯೋಗದೊಂದಿಗೆ ಕು: ಪ್ರಣೀತ ರಘುರಾಮ್, ಬೆಂಗಳೂರು ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ , ರಾಜಾಜಿನಗರ, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ನೃತ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರು ರವರ** ಸಹಯೋಗದೊಂದಿಗೆ ಕ್ರಿಷ್ವಿ ಆರ್ಟ್ ಫೌಂಡೇಷನ್ , ಬೆಂಗಳೂರು ಸಂಸ್ಥೆಯ ಕಲಾವಿದರುಳಿಂದ ಸಮೂಹ **ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

### II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- **ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ Soham Healing Center, ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯ ವತಿಯಿಂದ ಬುದ್ಧಿಮಾಂದ್ಯ ಮಕ್ಕಳು ತಯಾರಿಸಿದ ಪಾಠ ವಸ್ತುಗಳ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

# ಐಕ್ಯತಾ ಪ್ರಮಾಣ ವಚನ ಸ್ವೀಕಾರ

ಬೆಂಗಳೂರು, ನ. 19 : (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರಾದ ಎನ್.ಆರ್. ವಿಶುಕುಮಾರ್ ಅವರು ಇಂದು ಬೆಳಿಗ್ಗೆ 11-00 ಗಂಟೆಗೆ ಇಲಾಖೆಯ

ಅಧಿಕಾರಿಗಳು ಮತ್ತು ಸಿಬ್ಬಂದಿಗೆ ರಾಷ್ಟ್ರೀಯ ಐಕ್ಯತಾ ದಿನಾಚರಣೆಯ ಅಂಗವಾಗಿ ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನವನ್ನು ಬೋಧಿಸಿದರು.

ದೇಶದ ಪ್ರಧಾನಿಯಾಗಿ ಹೆಚ್ಚು ಕಾಲ ಆಡಳಿತ ನಡೆಸಿದ ಧೀಮಂತ ಮಹಿಳೆ ದಿವಂಗತ ಇಂದಿರಾಗಾಂಧಿ ಅವರ ಹುಟ್ಟುಹಬ್ಬದ ದಿನದಂದು ದೇಶದಾದ್ಯಂತ ರಾಷ್ಟ್ರೀಯ ಐಕ್ಯತಾ ದಿನಾಚರಣೆ ಆಚರಿಸಲಾಗುತ್ತಿದೆ. ಈ ಆಚರಣೆ ಒಂದು ದಿನಕ್ಕೆ ಮಾತ್ರ ಸೀಮಿತವಾಗಿರದೆ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಎಲ್ಲರೂ ಸರ್ಕಾರಿ ಕೆಲಸವನ್ನು ಅರ್ಪಣಾ ಮನೋಭಾವದಿಂದ ಮಾಡಬೇಕೆಂದು ನಿರ್ದೇಶಕರು ಈ ಸಂದರ್ಭದಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಇಲಾಖೆಯ ಜಂಟಿ ನಿರ್ದೇಶಕರಾದ ಎಂ. ರವಿಕುಮಾರ್, ಪಿ.ಎನ್. ಗುರುಮೂರ್ತಿ, ಎ.ಆರ್. ಪ್ರಕಾಶ್, ಉಪ ನಿರ್ದೇಶಕರಾದ ಹೆಚ್.ಬಿ. ದಿನೇಶ್, ಬಸವರಾಜ ಎಂ. ಕಂಬಿ, ಜಿಲ್ಲಾ ವಾರ್ತಾಧಿಕಾರಿಗಳು, ಕೇಂದ್ರ ಕಛೇರಿಯ ಅಧಿಕಾರಿ ಮತ್ತು ಸಿಬ್ಬಂದಿಯವರು ಉಪಸ್ಥಿತರಿದ್ದರು.

ಬಿಜಿಪಿ/ಕೆಎಂ

## ದತ್ತಮಾಲೆ ಕಾರ್ಯಕ್ರಮ: ಪ್ರವಾಸಿಗರ ನಿರ್ಬಂಧ

ಚಿಕ್ಕಮಗಳೂರು,ನ.19:–

ಶ್ರೀ ರಾಮಸೇನಾ ವತಿಯಿಂದ ಶ್ರೀ ಗುರುದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾದಲ್ಲಿ ನವೆಂಬರ್ 20 ರಂದು ದತ್ತಮಾಲೆ ಕಾರ್ಯಕ್ರಮ ನಡೆಯಲಿದ್ದು, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬರುವ ಹಿನ್ನೆಲೆಯಲ್ಲಿ ಐ.ಡಿ ಪೀಠ ಹಾಗೂ ಸುತ್ತಮುತ್ತಲಿನ ಪ್ರವಾಸಿ ತಾಣಗಳಿಗೆ ಆಗಮಿಸುವ ಪ್ರವಾಸಿಗರು ಬರುವುದನ್ನು ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

## ಅತಿ ಗಣ್ಯ ವ್ಯಕ್ತಿಗಳಿಗೆ ಮಾತ್ರ ಕೆಂಪು ದೀಪ ಬಳಸಲು ಅವಕಾಶ

ಬೆಂಗಳೂರು, ನ. 19 : (ಕರ್ನಾಟಕ ವಾರ್ತೆ)

ಕೇಂದ್ರ ಮೋಟಾರು ವಾಹನಕಾಯ್ದೆಗೆ ತಿದ್ದುಪಡಿ ಮಾಡಲಾಗಿದ್ದು, ಗಣ್ಯವ್ಯಕ್ತಿಗಳು ಹಾಗೂ ಸರ್ಕಾರಿ ಅಧಿಕಾರಿಗಳು ಬಳಸುವ ಸರ್ಕಾರಿ ವಾಹನಗಳ ಮೇಲೆ ಕೆಂಪು ದೀಪ ಬಳಸಲು ನಿಷೇಧ ಹೇರಲಾಗಿದೆ.

ಸರ್ಕಾರಿ ಅಧಿಕಾರಿಗಳ ಅಧಿಕೃತ ವಾಹನಗಳ ಮೇಲೆ ಕೆಂಪು ದೀಪ ಉಪಯೋಗಿಸುವ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ಆದೇಶದ ರೀತ್ಯ ಗಣ್ಯ/ಅತಿ ಗಣ್ಯ ವ್ಯಕ್ತಿಗಳು, ಇದುವರೆವಿಗೂ ಈ ಸಂಬಂಧ ಹೊರಡಿಸಿದ ಅಧಿಸೂಚನೆಗಳನ್ನು ಹಿಂದಕ್ಕೆ ಪಡೆದು, ಈ ಕೆಳಕಂಡ ಪ್ರತಿಷ್ಠಿತ ವ್ಯಕ್ತಿಗಳ ಅಧಿಕೃತ ವಾಹನಗಳ ಮೇಲೆ ಮಾತ್ರ ವಿಐಪಿ ರೆಡ್ ಟಾಪ್ ಬಳಸಲು ಸರ್ಕಾರವು ನಿರ್ಧಿಷ್ಟಪಡಿಸಿ ಅಧಿಸೂಚನೆಯನ್ನು ಹೊರಡಿಸಿದೆ.

1) ರಾಜ್ಯಪಾಲರು 2) ಮುಖ್ಯಮಂತ್ರಿ ಹಾಗೂ ಮಂತ್ರಿಮಂಡಲದ ಸಚಿವರುಗಳು 3) ಸಭಾಪತಿ, ಕರ್ನಾಟಕ ವಿಧಾನ ಪರಿಷತ್ತು 4) ಸಭಾಧ್ಯಕ್ಷರು, ಕರ್ನಾಟಕ ವಿಧಾನ ಸಭೆ 5) ಮುಖ್ಯ ನ್ಯಾಯಾಧೀಶರು ಹಾಗೂ ಹಾಲಿ ನ್ಯಾಯಾಧೀಶರುಗಳು, ಕರ್ನಾಟಕ ಉಚ್ಚ ನ್ಯಾಯಾಲಯ

ಮೇಲ್ಕಂಡ ಪ್ರತಿಷ್ಠಿತ ಗಣ್ಯರನ್ನು ಹೊರತುಪಡಿಸಿ, ಸಚಿವರುಗಳ ಸಮಾನ ಸ್ಥಾನಮಾನ ಹೊಂದಿರುವ ನಿಗಮ/ಮಂಡಳಿ/ಪ್ರಾಧಿಕಾರಗಳ ಅಧ್ಯಕ್ಷರು/ಮುಖ್ಯಸ್ಥರು ಹಾಗೂ ಕರ್ನಾಟಕ ಉಚ್ಛ ನ್ಯಾಯಾಲಯದ ನ್ಯಾಯಾಧೀಶರ ಸಮಾನ ಸ್ಥಾನಮಾನ ಹೊಂದಿರುವ ನ್ಯಾಯಮಂಡಳಿ/ ಆಯೋಗಗಳ ಅಧ್ಯಕ್ಷರುಗಳ/ಸದಸ್ಯರುಗಳು ತಮ್ಮ ಅಧಿಕೃತ ವಾಹನಗಳ ಮೇಲೆ ಕೆಂಪು ದೀಪ ಅಳವಡಿಸಿಕೊಳ್ಳುವಂತಿಲ್ಲ. ಇದೇ ರೀತಿ ಕಂದಾಯ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳೂ ಸೇರಿದಂತೆ ಯಾವುದೇ ಸರ್ಕಾರಿ ಅಧಿಕಾರಿಗಳು ಮತ್ತು ಇತರೆ ಗಣ್ಯರು ತಮ್ಮ ಅಧಿಕೃತ ವಾಹನಗಳ ಮೇಲೆ ಕೆಂಪುದೀಪ ಅಳವಡಿಸಿಕೊಳ್ಳುವಂತಿಲ್ಲ.

ಸದರಿ ಅಧಿಸೂಚನೆಯನ್ನು ಉಲ್ಲಂಘಿಸಿ ವಾಹನಗಳ ಮೇಲೆ ಅನಧಿಕೃತವಾಗಿ ಕೆಂಪುದೀಪ ಅಳವಡಿಸಿಕೊಂಡು ಸಂಚರಿಸುತ್ತಿರುವುದು ಕಂಡುಬಂದಲ್ಲಿ, ಅಂತಹ ವಾಹನಗಳ ವಿರುದ್ಧ ಸಂಬಂಧಪಟ್ಟ ಪ್ರಾದೇಶಿಕ/ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಗೆ ಅಥವಾ ಸಂಚಾರಿ ಪೊಲೀಸ್ ಠಾಣೆಗೆ ವಾಹನದ ನೋಂದಣಿ ಸಂಖ್ಯೆ ಅಥವಾ ಭಾವಚಿತ್ರದೊಂದಿಗೆ ಲಿಖಿತ ದೂರು ಸಲ್ಲಿಸಬಹುದಾಗಿದೆ. ಅಂತಹ ವಾಹನಗಳ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದೆಂದು ಸಾರಿಗೆ ಆಯುಕ್ತರ ಕಚೇರಿ ಪ್ರಕಟಣೆ ತಿಳಿಸಿದೆ.